ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	684
ವಿಧಾನಸಭೆ ಸದಸ್ಯರ ಹೆಸರು	:	ಶ್ರೀ ವಿಜಯ್ ಸಿಂಗ್
ಉತ್ತರಿಸುವ ದಿನಾಂಕ	:	17-12-2021
ಉತ್ತರಿಸುವ ಸಚಿವರು	:	ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಕಳೆದ 5 ವರ್ಷಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಎಷ್ಟು ವಿದ್ಯಾರ್ಥಿಗಳಿಗೆ ಎಷ್ಟು ವಿದ್ಯಾರ್ಥಿವೇತನ ನೀಡಲಾಗಿದೆ; (ವಿವರ ನೀಡುವುದು)	ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಪರಿಶಿಷ್ಟ ಜಾತಿ ವಿದ್ಯಾರ್ಥಿ ಗಳನ್ನು ಶೈಕ್ಷಣಿಕವಾಗಿ ಉತ್ತೇಜಿಸುವ ಸಲುವಾಗಿ 1 ರಿಂದ 8ನೇ ತರಗತಿ ವರೆಗೆ ಕುಟುಂಬದ ವಾರ್ಷಿಕ ಆದಾಯ ರೂ.6.00 ಲಕ್ಷಗಳ ಮಿತಿಯೊಳಗಿನ ವಿದ್ಯಾರ್ಥಿಗಳಿಗೆ ಹಾಗೂ 9 ರಿಂದ 10 ನೇ ತರಗತಿವರೆಗೆ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷಗಳ ಮಿತಿಯೊಳಗಿನ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ ಮಂಜೂರು ಮಾಡಲಾಗುತ್ತಿದೆ. ಮುಂದುವರೆದು, ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷಗಳ ಮಿತಿಯೊಳಗಿನ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಮಂಜೂರು ಮಾಡಲಾಗುತ್ತಿದೆ. ಕಳೆದ ಐದು ವರ್ಷಗಳಿಂದ 2016-17, 2017-18, 2018-19, 2019-20 ಮತ್ತು 2020-21ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಕಾರ್ಯಕ್ರಮಗಳಡಿ ಮಂಜೂರು ಮಾಡಿದ ವಿದ್ಯಾರ್ಥಿ ವೇತನದ ವಿವರಗಳನ್ನು ಈ ಕೆಳಕಂಡಂತೆ ನೀಡಲಾಗಿದೆ.

ಕಾರ್ಯಕ್ರಮ	ವರ್ಷ	ಮಂಜೂರು ಮಾಡಿದ ಅರ್ಜಿಗಳು	ಪಾವತಿ ಮಾಡಿದ ಅನುದಾನ (ರೂ. ಕೋಟಿಗಳಲ್ಲಿ)
ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ	2016-17	8,84,844	98.50
	2017-18	9,66,526	115.63
	2018-19	10,26,928	134.43
	2019-20	9,65,365	141.34
	2020-21	8,75,216	133.48
ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ	2016-17	2,97,478	345.01
	2017-18	3,24,476	361.21
	2018-19	3,33,759	425.70
	2019-20	3,42,925	454.69
	2020-21	2,48,833	227.36

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 2020-21ನೇ ಸಾಲಿನಲ್ಲಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ ದಿನಾಂಕ:08-01-2021 ರಿಂದ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕೆ ದಿನಾಂಕ:02-01-2021 ರಿಂದ ಇ-ಆಡಳಿತ ಇಲಾಖೆಯ ರಾಜ್ಯ ವಿದ್ಯಾರ್ಥಿ ವೇತನ ಪೋರ್ಟಲ್ ಮೂಲಕ ವಿದ್ಯಾರ್ಥಿಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿರುವುದರಿಂದ, ಸದರಿ ಸಾಲಿನ ಅರ್ಜಿಗಳ ಮಂಜೂರಾತಿ ಪ್ರಕ್ರಿಯೆ ಇನ್ನೂ ಪ್ರಗತಿಯಲ್ಲಿರುತ್ತದೆ.

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ಕಳೆದ 5 ವರ್ಷಗಳಲ್ಲಿ ರೂ.82943.52 ಲಕ್ಷಗಳ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಂಜೂರು ಮಾಡಲಾಗಿದೆ. ಇದರಿಂದ 5 ವರ್ಷಗಳಲ್ಲಿ ಒಟ್ಟು 25,50,934 ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಪ್ರಯೋಜನ ಪಡೆದಿರುತ್ತಾರೆ.

ವಿವರ ಈ ಕೆಳಕಂಡಂತಿದೆ.

ಕ್ರಸಂ	ವರ್ಷ	ಪ್ರಯೋಜನ ಪಡೆದಿರುವ ವಿದ್ಯಾರ್ಥಿಗಳ ಸಂಖ್ಯೆ	ಮಂಜೂರು ಮಾಡಿದ ಮೊತ್ತ (ರೂ.ಲಕ್ಷಗಳಲ್ಲಿ)
ಮೆಟ್ರಿಕ್ ಪೂರ್ವ (1 ರಿಂದ 8ನೇ ತರಗತಿ)			
1	2016–17	301596	2980.96
2	2017–18	322432	2973.75
3	2018–19	372504	4150.65
4	2019–20	352198	3957.58
5	2020–21	315114	3592.00
ಒಟ್ಟು		16,63,844	17654.94
ಮೆಟ್ರಿಕ್ ಪೂರ್ವ (9 ಮತ್ತು 10ನೇ ತರಗತಿ)			
1	2016–17	48727	1096.35
2	2017–18	57000	1282.50
3	2018–19	71783	1614.91
4	2019–20	69466	1561.77
5	2020–21	75447	2263.00
ಒಟ್ಟು		3,22,423	7818.53
ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ			
1	2016–17	104584	11031.32
2	2017–18	117636	10690.77
3	2018–19	123250	15137.85
4	2019–20	126780	13392.11
5	2020–21	92417	7218.00
ಒಟ್ಟು		5,64,667	57470.05
ಒಟ್ಟಾರೆ		25,50,934	82943.52

ಸಕಇ 486 ಪಕವಿ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.